ಕರ್ನಾಟಕ ಸರ್ಕಾರ

# ಗೃಹ ಜ್ಯೋತಿ - ಪದೇ ಪದೇ ಕೇಳಲಾಗುವ ಪ್ರಶ್ನೆಗಳು

1. **ನಾನು ಈ ಯೋಜನೆಗೆ ಅರ್ಹನೇ?**

   ಕರ್ನಾಟಕ ರಾಜ್ಯದ ಎಲ್ಲಾ ಗೃಹ ಬಳಕೆ ಗ್ರಾಹಕರು ಈ ಯೋಜನೆಗೆ ಅರ್ಹರಾಗಿರುತ್ತಾರೆ.

2. **ಗೃಹ ಜ್ಯೋತಿ ಯೋಜನೆ ಎಂದರೇನು?**

   "ಗೃಹ ಜ್ಯೋತಿ"ಕರ್ನಾಟಕ ಸರ್ಕಾರದ ಪ್ರಮುಖ ಯೋಜನೆಯಾಗಿದ್ದು, ಇದು ಕರ್ನಾಟಕದ ಪ್ರತಿ ಗೃಹ ಬಳಕೆದಾರರಿಗೆ 200 ಯೂನಿಟ್‌ಗಳನ್ನು ಒಳಗೊಂಡಂತೆ ಉಚಿತ ವಿದ್ಯುತ್ ಅನ್ನು ಒದಗಿಸುತ್ತದೆ.

3. **ಈ ಯೋಜನೆಯನ್ನು ಪಡೆಯಲು ನಾನು ಏನು ಮಾಡಬೇಕು?**

   ಈ ಯೋಜನೆಯನ್ನು ಪಡೆಯಲು ಪ್ರತಿ ಗೃಹ ಬಳಕೆ ಗ್ರಾಹಕರು ಸೇವಾ ಸಿಂಧು ವೆಬ್‌ಸೈಟ್‌ನಲ್ಲಿ ನೋಂದಾಯಿಸಿಕೊಳ್ಳಬೇಕು. ಇದರ ಲಿಂಕ್ ಅನ್ನು ಶೀಘ್ರದಲ್ಲೇ ಹಂಚಿಕೊಳ್ಳಲಾಗುವುದು, ನೋಂದಣಿ ಜೂನ್-15 ರಿಂದ ಪ್ರಾರಂಭವಾಗುತ್ತದೆ.

4. **ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗುತ್ತದೆ?**

   ಜುಲೈ 2023 ರಲ್ಲಿ ಬಳಸಿದ ವಿದ್ಯುತ್ ಬಳಕೆಯನ್ನು ಆಗಸ್ಟ್ 2023 ರಲ್ಲಿ ನೀಡುವ ಬಿಲ್ಲಿಗೆ ಅನ್ವಯವಾಗುವಂತೆ ಯೋಜನೆಯನ್ನು ಜಾರಿಗೊಳಿಸಲಾಗುವುದು.

5. **ಈ ಯೋಜನೆಯನ್ನು ನಾನು ಹೇಗೆ ಮತ್ತು ಎಲ್ಲಿ ಪಡೆಯಬಹುದು?**

   ಈ ಯೋಜನೆಯನ್ನು ಪಡೆಯಲು ಕರ್ನಾಟಕ ಸರ್ಕಾರದ ಸೇವಾ ಸಿಂಧು ವೆಬ್ ಸೈಟ್ ನಲ್ಲಿ ಅರ್ಜಿ ಸಲ್ಲಿಸುವುದು. ಇದರ ಲಿಂಕ್ ಅನ್ನು ಶೀಘ್ರದಲ್ಲೇ ಒದಗಿಸಲಾಗುವುದು, ನೋಂದಣಿಯು ಜೂನ್-15 ರಿಂದ ಪ್ರಾರಂಭವಾಗುತ್ತದೆ.

6. **ಈ ಯೋಜನೆಯನ್ನು ಆಫ್ಲೈನ್ (Offline) ಮೂಲಕ ನಾನು ಪಡೆಯಬಹುದೇ?**

   ಹೌದು. ಎಲ್ಲಾ ಗೃಹಬಳಕೆ ಗ್ರಾಹಕರಿಗೆ ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಬೆಂಗಳೂರು ಒನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು.

7. **ಈ ಯೋಜನೆ ಪಡೆಯಲು ಯಾವುದೆಲ್ಲಾ ದಾಖಲೆಗಳನ್ನು ಸಲ್ಲಿಸಬೇಕು?**

ಆಧಾರ್ ಸಂಖ್ಯೆ, ಬಿಲ್ಲಿನಲ್ಲಿ ನಮೂದಿಸಲಾಗಿರುವ ಗ್ರಾಹಕರ ಸಂಖ್ಯೆ/ಖಾತೆ ಸಂಖ್ಯೆ ಬಾಡಿಗೆ/ ಭೋಗ್ಯದ ಕರಾರು ಪತ್ರ (ಬಾಡಿಗೆ/ಭೋಗ್ಯ ದಾರರಾಗಿದ್ದಲ್ಲಿ) ಸಲ್ಲಿಸುವುದು ಅಥವ ಸಂಬಂಧಿತ ವಿಳಾಸವನ್ನು ಸೂಚಿಸುವ ವೋಟರ್ ID ಸಲ್ಲಿಸುವುದು.

8. ಅರ್ಜಿ ಸಲ್ಲಿಸುವಾಗ ನಾನು ಶುಲ್ಕ ಪಾವತಿಸಬೇಕೆ?

ಈ ಯೋಜನೆಯಡಿಯಲ್ಲಿ ಯಾವುದೇ ಶುಲ್ಕವನ್ನು ಸೇವಾಸಿಂಧು ಪೋರ್ಟಲ್ ನಲ್ಲಿ ಪಾವತಿಸಬೇಕಾಗಿರುವುದಿಲ್ಲ.

9. ನಾನು ಜೂನ್ ತಿಂಗಳ ವಿದ್ಯುತ್ ಬಿಲ್ಲನ್ನು ಪಾವತಿಸಬೇಕೆ?

ಹೌದು. ಈ ಯೋಜನೆಯು ಜುಲೈ 2023 ತಿಂಗಳ ವಿದ್ಯುತ್ ಬಳಕೆಗೆ ಅನ್ವಯಿಸಲಿದ್ದು, 1 ನೇ ಆಗಸ್ಟ್ 2023 ಹಾಗೂ ನಂತರದ ಮಾಪಕ ಓದುವ ದಿನಾಂಕದಿಂದ ಅನ್ವಯಿಸುತ್ತದೆ.

10. ನನಗೆ ಒಂದಕ್ಕಿಂತ ಹೆಚ್ಚು ವಿದ್ಯುತ್ ಮಾಪಕಗಳಿದ್ದರೆ, ನಾನು ಈ ಯೋಜನೆಗೆ ಅರ್ಹನೇ?

ಇಲ್ಲ. ಪ್ರತಿ ಗ್ರಾಹಕರು ಒಂದು ಮೀಟರ್ ಗೆ ಮಾತ್ರ ಯೋಜನೆಗೆ ಅರ್ಹರಾಗಿರುತ್ತಾರೆ.

11. ಅರ್ಜಿ ಸಲ್ಲಿಸಿದ ನಂತರ ನಾನು ಯಾವುದೇ ಸ್ವೀಕೃತಿಯನ್ನು ಪಡೆಯುತ್ತೇನೆಯೇ?

ಹೌದು, ಸೇವಾ ಸಿಂಧುವಿನಿಂದ ಸ್ವೀಕೃತಿ ಸಂದೇಶವನ್ನು ನೋಂದಾಯಿತ ಗ್ರಾಹಕರಿಗೆ ಇಮೇಲ್/SMS ಮೂಲಕ ಕಳುಹಿಸಲಾಗುತ್ತದೆ.

12. ನಾನು ಈಗಾಗಲೇ ಈ ಯೋಜನೆಗೆ ಅರ್ಜಿ ಸಲ್ಲಿಸಿದ್ದೇನೆ, ಯೋಜನೆಯ ಲಾಭವು ಯಾವಾಗ ನನ್ನ ಖಾತೆಗೆ ಸೇರಲು ಪ್ರಾರಂಭವಾಗುತ್ತದೆ?

ಜುಲೈ-23 ರಲ್ಲಿ ನೀಡಿದ ಬಿಲ್ ಅನ್ನು ಯೋಜನೆಯ ಲಾಭ ಇಲ್ಲದೆ ಪಾವತಿಸಬೇಕಾಗುತ್ತದೆ. ಯೋಜನೆಯ ಪ್ರಯೋಜನಗಳು ಮೀಟರ್ ಓದುವ ದಿನಾಂಕದಿಂದ ಅಂದರೆ 1ನೇ ಆಗಸ್ಟ್ 2023 ರಂದು ಅಥವಾ ನಂತರ ಅನ್ವಯಿಸುತ್ತದೆ (ಜುಲೈ-2023 ಬಳಕೆಗಾಗಿ).

13. ನಾನು ಅಪಾರ್ಟ್ಮೆಂಟ್ (ವಸತಿ ಸಮುಚ್ಛಯ) ಮಾಲೀಕನಾಗಿದ್ದೇನೆ, ನಾನು ಈ ಯೋಜನೆಗೆ ಅರ್ಜಿ ಸಲ್ಲಿಸಬಹುದೇ?

ಹೌದು, ಪ್ರತ್ಯೇಕ ವಿದ್ಯುತ್ ಮೀಟರ್‌ಗಳು ಲಭ್ಯವಿದ್ದರೆ/ಸ್ಥಾಪಿಸಿದ್ದರೆ ಯೋಜನೆಗೆ ಅರ್ಜಿ ಸಲ್ಲಿಸಬಹುದು.

14. ನಾನು ಬಾಡಿಗೆದಾರ; ಬಿಲ್ ಮಾಲೀಕರ ಹೆಸರಿನಲ್ಲಿದೆ, ನನಗೂ ಯೋಜನೆ ಅನ್ವಯವಾಗುವುದೇ?

ಹೌದು.  ಆಧಾರ್ ಸಂಖ್ಯೆ, ಬಿಲ್ಲಿನಲ್ಲಿ ನಮೂದಿಸಲಾಗಿರುವ ಗ್ರಾಹಕರ ಸಂಖ್ಯೆ/ಖಾತೆ ಸಂಖ್ಯೆ, ಬಾಡಿಗೆ/ ಭೋಗ್ಯದ ಕರಾರು ಪತ್ರ (ಬಾಡಿಗೆ/ಭೋಗ್ಯ ದಾರರಾಗಿದ್ದಲ್ಲಿ) ಸಲ್ಲಿಸುವುದು ಅಥವ ಸಂಬಂಧಿತ ವಿಳಾಸವನ್ನು ಸೂಚಿಸುವ ವೋಟರ್ ID ಸಲ್ಲಿಸಿ ಯೋಜನೆಯ ಲಾಭ ಪಡೆಯಬಹುದು.

**15. ಯೋಜನೆಯ ಅಡಿಯಲ್ಲಿ ಬಾಡಿಗೆ/ಭೋಗ್ಯ ದಾರನಾಗಿ ನಾನು ನೋಂದಾಯಿಸಲು ಸಲ್ಲಿಸಬೇಕಾದ ದಾಖಲೆಗಳು ಯಾವುವು?**

ಬಾಡಿಗೆ/ ಭೋಗ್ಯ ದಾರರು ವಿಳಾಸ ಪುರಾವೆಯೊಂದಿಗೆ ನೋಂದಾಯಿಸಿಕೊಳ್ಳಬಹುದು - ಸದರಿ ಯೋಜನೆಯ ಪ್ರಯೋಜನ ಪಡೆದುಕೊಳ್ಳಲು ಆಧಾರ್ ಜೊತೆಗೆ ಬಾಡಿಗೆ/ ಭೋಗ್ಯದ ಕರಾರು ಪತ್ರವನ್ನು ಸಲ್ಲಿಸುವುದು.

**16. ನಾನು 2 ತಿಂಗಳ ಹಿಂದೆ ಮನೆಯನ್ನು ಬದಲಾಯಿಸಿದ್ದೇನೆ, ನನಗೆ ಲಾಭ ಸಿಗುತ್ತದೆಯೇ?**

ಹೌದು, ಹೊಸ ಸಂಪರ್ಕಕ್ಕಾಗಿ ನಿಯಮಾವಳಿಗಳನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.

**17. ನಾನು ಅಂಗಡಿಯ ಮಾಲೀಕರಾಗಿದ್ದೇನೆ, ನಾನು ಸಹ ಯೋಜನೆಯ ಪ್ರಯೋಜನ ಪಡೆಯಲು ಅರ್ಜಿ ಸಲ್ಲಿಸಬಹುದೇ?**

ಇಲ್ಲ, ಗೃಹಬಳಕೆ ದಾರರಿಗೆ ಮಾತ್ರ ಈ ಯೋಜನೆ ಅನ್ವಯಿಸುತ್ತದೆ.

**18. ನಾನು ಎಷ್ಟು ಉಚಿತ ಯೂನಿಟ್ ವಿದ್ಯುತ್‌ಗೆ ಅರ್ಹನಾಗುತ್ತೇನೆ? ತಿಂಗಳಿಗೆ 200 ಯೂನಿಟ್ ಗಳಿಗೆ ನಾನು ಅರ್ಹನೇ?**

2022-23 ರ ಸರಾಸರಿ ವಿದ್ಯುತ್ ಬಳಕೆ + ಶೇಕಡ 10% ಹೆಚ್ಚಳ (ಎರಡು ಸೇರಿಸಿದರೆ ಒಟ್ಟು 200 ಯೂನಿಟ್‌ಗಳಿಗಿಂತ ಒಳಗಿರಬೇಕು) ಸರಾಸರಿ ಬಳಕೆಯ ಆಧಾರದ ಮೇಲೆ ಲಾಭವನ್ನು ಲೆಕ್ಕೀಕರಿಸಲಾಗುತ್ತದೆ.

**19. ವಿದ್ಯುತ್ ಬಿಲ್ಲಿನ ಖಾತೆ ಸಂಖ್ಯೆಯನ್ನು ನಾನು ಎಲ್ಲಿ ಹುಡುಕಬೇಕು?**

ವಿದ್ಯುತ್ ಬಿಲ್ಲಿನ ಖಾತೆ ಸಂಖ್ಯೆಯು ಪ್ರತಿ ತಿಂಗಳ ವಿದ್ಯುತ್ ಬಿಲ್‌ನಲ್ಲಿ ಲಭ್ಯವಿರುತ್ತದೆ.

**20. ಈ ಯೋಜನೆಯನ್ನು ಪಡೆಯಲು ಖಾತೆ ಸಂಖ್ಯೆಯೊಂದಿಗೆ ಆಧಾರ್ ಅನ್ನು ಲಿಂಕ್ ಮಾಡುವುದು ಕಡ್ಡಾಯವೇ?**

ಹೌದು, ಗ್ರಾಹಕ ಸಂಖ್ಯೆ/ಖಾತೆ ಸಂಖ್ಯೆ ಯೊಂದಿಗೆ ಆಧಾರ್ ಲಿಂಕ್ ಮಾಡುವುದು ಕಡ್ಡಾಯವಾಗಿದೆ.

**21. ನನ್ನ ಆಧಾರ್ ಕರ್ನಾಟಕದ ಹೊರಗೆ ನೋಂದಾಯಿಸಲ್ಪಟ್ಟಿದೆ. ನಾನು ಈ ಯೋಜನೆ ಪಡೆಯಲು ಅರ್ಹನಾಗುತ್ತೇನೆಯೇ?**

ಹೌದು, ನೀವು ಕರ್ನಾಟಕದ ವಿಳಾಸ ಪುರಾವೆಯೊಂದಿಗೆ ಕರ್ನಾಟಕದಲ್ಲಿ ಎಲ್ಲಿಯಾದರೂ ವಾಸಿಸುತ್ತಿದ್ದರೆ, ನೀವು ಯೋಜನೆಗೆ ಅರ್ಹರಾಗಿದ್ದೀರಿ.

22. ನಾನು ವಿದ್ಯುತ್ ಬಿಲ್ ಬಾಕಿಯನ್ನು ಉಳಿಸಿಕೊಂಡಿದ್ದರೆ, ನಾನು ಈ ಯೋಜನೆಗೆ ಅರ್ಹನೇ?

ಹೌದು. ಆದರೆ, ಜೂನ್ 30 ರವರೆಗಿನ ವಿದ್ಯುತ್ ಬಾಕಿಯನ್ನು 3 ತಿಂಗಳೊಳಗೆ ಪಾವತಿಸಬೇಕು, ಪಾವತಿಸದಿದ್ದರೆ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗುತ್ತದೆ.

23. ಒಂದು ವೇಳೆ ನಾನು ಈ ಯೋಜನೆಯ ಫಲಾನುಭವಿಯಾಗಿ, ನನಗೆ ನಿಗದಿ ಪಡಿಸಿರುವ ಉಚಿತ ವಿದ್ಯುತ್ ಗಿಂತ ಜಾಸ್ತಿ ಯೂನಿಟ್ ಬಳಸಿದರೆ, ನಾನು ಆ ಹೆಚ್ಚಿನ ಯೂನಿಟ್ ಗಳಿಗೆ ಪಾವತಿಸಬೇಕಾಗುತ್ತದೆ ಎಂಬುದು ನನಗೆ ತಿಳಿದಿದೆ. ಆದರೆ, ಆ ಹೆಚ್ಚಿನ ಯೂನಿಟ್ ಬಳಕೆಯ ಬಿಲ್ಲನ್ನು ಪಾವತಿಸದಿದ್ದರೆ, ನನ್ನನ್ನು ಈ ಯೋಜನೆಯಿಂದ ಅನರ್ಹಗೊಳಿಸಲಾಗುವುದೇ?

ಇಲ್ಲ. ಬಾಕಿ ಪಾವತಿಸದಿದ್ದರೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು. ಬಾಕಿಯನ್ನು ಪಾವತಿಸಿದ ನಂತರ ಪುನಃ ಈ ಯೋಜನೆಯ ಸೌಲಭ್ಯಗಳನ್ನು ಪಡೆಯಬಹುದು.

24. ವಿದ್ಯುತ್ ಬಿಲ್ ನನ್ನ ದಿವಂಗತ ತಂದೆಯ ಹೆಸರಿನಲ್ಲಿದೆ? ಇದಕ್ಕಾಗಿ ನಾನು ಹೇಗೆ ಅರ್ಜಿ ಸಲ್ಲಿಸಬಹುದು?

ವಿದ್ಯುತ್ ಸಂಪರ್ಕವನ್ನು ನಿಮ್ಮ ಹೆಸರಿಗೆ ವರ್ಗಾಯಿಸಬೇಕು ಮತ್ತು ತದ ನಂತರ ಈ ಯೋಜನೆಗೆ ಅರ್ಜಿ ಸಲ್ಲಿಸಬೇಕು. ಹೆಸರಿನ ಬದಲಾವಣೆಯನ್ನು ಎಲ್ಲಾ ಉಪ ವಿಭಾಗಗಳಲ್ಲಿನ ಜನ ಸ್ನೇಹಿ ವಿದ್ಯುತ್ ಸೇವಾ ಕೌಂಟರ್‌ಗಳಲ್ಲಿ ಮಾಡಲಾಗುತ್ತದೆ.

25. ನನ್ನ ಮಾಸಿಕ ಬಳಕೆಯು 200 ಯೂನಿಟ್‌ಗಳಿಗಿಂತ ಹೆಚ್ಚಿದ್ದರೆ, ಸಂಪೂರ್ಣ ಬಿಲ್ ಮೊತ್ತವನ್ನು ಪಾವತಿಸಬೇಕೇ?

ಹೌದು. ಆ ನಿರ್ದಿಷ್ಟ ತಿಂಗಳಿಗೆ ಮಾತ್ರ ನೀವು ಸಂಪೂರ್ಣ ಬಿಲ್ ಮೊತ್ತವನ್ನು ಪಾವತಿಸಬೇಕಾಗುತ್ತದೆ.

26. ನನ್ನ ವಿದ್ಯುತ್ ಬಳಕೆಯು ಉಚಿತ ಯೂನಿಟ್ ಗಳಿಗಿಂತ ಕಡಿಮೆಯಿದ್ದರೆ, ಬಿಲ್ ಮೊತ್ತ ಏನಾಗುತ್ತದೆ?

ವಿದ್ಯುತ್ ಬಳಕೆಯು ಅರ್ಹ ಯೂನಿಟ್ ಗಳಿಗಿಂತ ಕಡಿಮೆಯಿದ್ದರೆ ನೀವು 'ಶೂನ್ಯ ಬಿಲ್' ಪಡೆಯುತ್ತೀರಿ.